# ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ : M/s Aditya Birla Renewables Solar Limited ಇವರಿಗೆ ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ 21 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಕುರಿತು.

**ಓದಲಾಗಿದೆ :** 1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರ ಪತ್ರ ಸಂಖ್ಯೆ:KREDL/ 08/ ABRSL-21 MW/Vijayanagar/F-11/2023/0218, ದಿನಾಂಕ: 19.01.2023.

2) ದಿನಾಂಕ:21.01.2023 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿ.

3) ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ:15113/2022 (GM-RES)

559
9/2/23

**ಪ್ರಸ್ತಾವನೆ :-**

ಮೇಲೆ ಓದಲಾದ (1)ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್.ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Aditya Birla Renewables Solar Limited ಇವರಿಗೆ ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ, ಬನವಿಕಲ್ಲು ಮತ್ತು ಕಡೇಕೋಲಾ ಗ್ರಾಮಗಳಲ್ಲಿ 21 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಕುರಿತು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ, ಕೆ.ಆರ್.ಇ.ಡಿ.ಎಲ್. ನಿಯಮಿತಕ್ಕೆ ಸಲ್ಲಿಸಿರುವುದಾಗಿ ಹಾಗೂ ಸದರಿ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ವೀಲಿಂಗ್ ಮತ್ತು ಬ್ಯಾಂಕಿಂಗ್ ಮುಖಾಂತರ ಸಮೂಹ ಸ್ವಂತ ಬಳಕೆಗೆ/ಮೂರನೇ ವ್ಯಕ್ತಿಗೆ ಮಾರಾಟ ಮಾಡುವ ವರ್ಗದಡಿ ಪ್ರತಿ ವಿಂಡ್ ಟರ್ಬೈನ್ ಗೆ 4 ಎಕರೆಯಂತೆ Footprint basis ಲೆಕ್ಕೀಕರಿಸಿ, ಜಮೀನುಗಳನ್ನು ಉಪಯೋಗಿಸುವುದು ಮತ್ತು ಪವನ ವಿದ್ಯುತ್ ಘಟಕಗಳ ಅಂತರವನ್ನು MNRE ಸುತ್ತೋಲೆ/ಮಾರ್ಗಸೂಚಿಯಂತೆ ಅಳವಡಿಸುವಂತೆ ಷರತ್ತುಗಳನ್ನು ವಿಧಿಸಿ, ಹಂಚಿಕೆ ನೀಡುವಂತೆ ಕೋರಿರುವುದಾಗಿ ತಿಳಿಸಿರುತ್ತಾರೆ.

M/s Aditya Birla Renewables Solar Limited ಇವರು 21 ಮೆ.ವ್ಯಾ. ಸಾಮರ್ಥ್ಯಕ್ಕೆ 10 ವಿಂಡ್ ಟರ್ಬೈನ್‌ಗಳನ್ನು ಅಳವಡಿಸುತ್ತಿದ್ದು, ಪ್ರತಿ ಟರ್ಬೈನ್‌ಗೆ 04 ಎಕರೆಯಂತೆ ಲೆಕ್ಕೀಕರಿಸಿ ಒಟ್ಟು 40 ಎಕರೆ (10 Nos of WTG x 4 Acres = 40 Acres) ಜಮೀನನ್ನು ಮಾತ್ರ ಟೋಪೋಶೀಟ್ ಸಂಖ್ಯೆ:57 B/5 ಮತ್ತು 57 B/6 ರಲ್ಲಿ ಉಪಯೋಗಿಸಿಕೊಳ್ಳಬಹುದಾಗಿದೆ ಹಾಗೂ ಸದರಿಯವರು ಕೋರಿರುವ ಸ್ಥಳವು ಹಂಚಿಕೆಗೆ ಲಭ್ಯವಿರುತ್ತದೆ.

M/s Aditya Birla Renewables Solar Limited ಕಂಪನಿಯು ದಿನಾಂಕ:10.04.2020 ರಂದು ನೊಂದಾವಣೆಗೊಂಡಿದ್ದು, ಇದರ ನೊಂದಾಯಿತ ಕಚೇರಿಯು ಮುಂಬಯಿಯಲ್ಲಿ ಸ್ಥಾಪಿತಗೊಂಡಿದೆ. ಸದರಿ ಕಂಪನಿಯ ನೆಟ್‌ವರ್ತ್ ದಿನಾಂಕ:30.09.2022ರ ಅಂತ್ಯಕ್ಕೆ ರೂ.67.80 ಕೋಟಿಗಳಾಗಿದ್ದು, ಸಮೂಹ ಸ್ವಂತ (Group Captive) ಬಳಕೆ ವರ್ಗದಡಿ ಪರಿಗಣಿಸಲು ಇರುವ ನಿಯಮಗಳಂತೆ M/s Hindalco Industries Limited ಕಂಪನಿಯವರು (RR No.HTS-05) ಕಂಪನಿಯು ಬಳಸಿಕೊಳ್ಳಲಿದ್ದು, ಸದರಿ ಕಂಪನಿಯು ಶೇ.26ರಷ್ಟು ಷೇರನ್ನು M/s Aditya Birla Renewables Solar Limited ಕಂಪನಿಯಲ್ಲಿ ಹೊಂದಿರುತ್ತದೆ ಹಾಗೂ ಶೇ.51ರಷು ವಿದ್ಯುತ್ತನ್ನು ಸಮೂಹ ಬಳಕೆ ವರ್ಗದಡಿ ಬಳಸಿಕೊಂಡು ಹೆಚ್ಚುವರಿ ವಿದ್ಯುತ್ತನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಕೆ.ಆರ್.ಇ.ಡಿ.ಎಲ್.ನಿಯಮಿತವು ತಿಳಿಸಿರುತ್ತಾರೆ.

MD KREDL

AGM(W) 14/2

ಮೇಲೆ ಓದಲಾದ (2)ರ ಹಂಚಿಕೆ ಸಮಿತಿ ಸಭೆಯಲ್ಲಿ M/s Aditya Birla Renewables Solar Limited ಇವರು ವಿಜಯನಗರ ಜಿಲ್ಲೆಯ, ಕೂಡ್ಲಿಗಿ ತಾಲ್ಲೂಕಿನ, ಬನವಿಕಲ್ಲು ಮತ್ತು ಕಡೇಕೋಲಾ ಗ್ರಾಮಗಳಲ್ಲಿ State Grid ವರ್ಗದಡಿಯಲ್ಲಿ ಹಂಚಿಕೆಗಾಗಿ ಕೋರಿರುವ 21 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್

GM (Tech) KREDL

Wind Section Inward No. 1635 Date. 15/2/23 Sig.